# <u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ : 1019 (1235)

ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 21.08.2025

ಉತ್ತರಿಸುವ ಸಚಿವರು : ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರವಾಸೋದ್ಯಮ ಇಲಾಖೆ ವತಿಯಿಂದ ಸ್ವಯಂ ಉದ್ಯೋಗಕ್ಕಾಗಿ ಯುವಕರಿಗೆ ಟ್ಯಾಕ್ಸಿ ನೀಡುವ ಯೋಜನೆ ಇದ್ದು ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆ ಅಡಿಯಲ್ಲಿ ಲಾಭ ಪಡೆದಿರುವವರ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | 2022-23ನೇ ಹಾಗೂ 2024-25ನೇ ಸಾಲಿನಲ್ಲಿ ಸದರಿ ಯೋಜನೆಯನ್ನು ಹಮ್ಮಿಕೊಂಡಿರುವುದಿಲ್ಲ.<br><br>2023-24ನೇ ಸಾಲಿನಲ್ಲಿ 2013-14ನೇ ಸಾಲಿನಿಂದ 2019-20ನೇ ಸಾಲಿನವರೆಗೆ ಗುರಿ ಸಾಧಿಸದೇ ಇರುವುದರಿಂದ ಅಂತಹ ಜಿಲ್ಲೆಗಳ ಗುರಿಗಳನ್ನು ಗದಗ ಜಿಲ್ಲೆಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹಾಗೂ ಹಿಂದುಳಿದ ವರ್ಗ, ಅಲ್ಪಸಂಖ್ಯಾತ ವರ್ಗದ ನಿರುದ್ಯೋಗಿ ಅಭ್ಯರ್ಥಿಗಳಿಗೆ 198 ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸಲಾಗಿದೆ. |
| ಆ) | 2024-25ನೇ ಸಾಲಿನಲ್ಲಿ ಈ ಯೋಜನೆಯ ಫಲಾನುಭವಿಗಳು ಯಾರು ಯೋಜನೆ ಅಡಿ ಅನುಮೋದನೆಗೊಂಡಿದ್ದರು ವಾಹನ ಖರೀದಿಗೆ ನೆರವು ದೊರಕದಿರುವುದು ನಿಜವೇ; ಪ್ರವಾಸೋದ್ಯಮ ಉತ್ತೇಜಿಸುವ ಹಾಗೂ ಕೊನೆ ಹಂತವನ್ನು ಜೋಡಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತಿದ್ದ ಈ ಯೋಜನೆಗೆ ಮೂಲ ಕಾರ್ಯಕ್ರಮಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು) | 2024-25ನೇ ಸಾಲಿನಲ್ಲಿ ಪ್ರವಾಸಿ ಟ್ಯಾಕ್ಸಿ ಸಹಾಯಧನ ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ.<br><br>2024-25ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಯೋಜನೆಯಡಿ ನಿರುದ್ಯೋಗಿ ಉದ್ಯೋಗಿಗಳಿಗೆ ಸ್ವ-ಉದ್ಯೋಗ ಕಲ್ಪಿಸಿಕೊಳ್ಳಲು ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br><br>1. ಪ್ರವಾಸೋದ್ಯಮ ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ.<br>• Food & Bewerage Steward Service<br>• Front Office Associate.<br>• Room Attendant<br>• Multi Cuisine Cook.<br><br>2. ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು Entrepreneurship Programme (EP)ತರಬೇತಿ ಹಾಗೂ ಮೊಬೈಲ್ ಕ್ಯಾಂಟೀನ್ ವಾಹನವನ್ನು |
| ಇ) | ಪ್ರವಾಸೋದ್ಯಮ ಉತ್ತೇಜಿಸುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಯೋಜನೆ ಹಾಕಿಕೊಂಡಿದೆಯೇ; ಈ ಯೋಜನೆಯ ಕುರಿತು ಸಮಗ್ರ ಮಾಹಿತಿಯನ್ನು ಒದಗಿಸುವುದು ಈ ಯೋಜನೆ ಸ್ಥಗಿತಗೊಂಡಿದ್ದರೆ ಕಾರಣಗಳೇನು; | |
| ಈ) | ಸರ್ಕಾರ ಸ್ವಯಂ ಉದ್ಯೋಗಕ್ಕಾಗಿ ಕಲ್ಪಿಸಿರುವ ಅನ್ಯ ಯೋಜನೆಗಳಾವುವು; ಪ್ರವಾಸೋದ್ಯಮಕ್ಕೆ ಪುಷ್ಟಿ ನೀಡಲು ಕೊನೆ ಹಂತದವರೆಗೂ ಶಾಶ್ವತವಾಗಿರಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು? (ವಿವರ | |

| | | |
|---|---|---|
| | ನೀಡುವುದು) | ಖರೀದಿಸಲು ಸಹಾಯಧನ ವಿತರಿಸುವ ಕಾರ್ಯಕ್ರಮ.<br>3. ಪ್ರವಾಸಿ ಮಾರ್ಗದರ್ಶಿ ತರಬೇತಿ ಕಾರ್ಯಕ್ರಮ.<br><br>2025-26ನೇ ಸಾಲಿನಲ್ಲಿ ಪ್ರವಾಸಿ ಟ್ಯಾಕ್ಸಿ ಯೋಜನೆಯನ್ನು ಹಮ್ಮಿಕೊಳ್ಳಲು ಕ್ರಿಯಾ ಯೋಜನೆಯಲ್ಲಿ ಸೇರಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಟಿಓಆರ್ 2242 ಟಿಡಿವಿ 2025**

**(ಹೆಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು